ಕರ್ನಾಟಕ ಸರ್ಕಾರ

ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿಇ/ಶೈಶಾ/ಮಮವಿ/2021-22 ದಿನಾಂಕ:04-12-2021.

## ತಿದ್ದುಪಡಿ ಸುತ್ತೋಲೆ

ವಿಷಯ:- 2021-22ನೇ ಶೈಕ್ಷಣಿಕ ಸಾಲಿನ ಪ್ರಥಮ ಮತ್ತು ದ್ವಿತೀಯ ಪಿಯುಸಿ ಮಧ್ಯವಾರ್ಷಿಕ ಪರೀಕ್ಷಾ ವೇಳಾಪಟ್ಟಿಯ ಕುರಿತು.

ಉಲ್ಲೇಖ:- ಈ ಕಛೇರಿ ಸಮ ಸಂಖ್ಯೆ: ಸುತ್ತೋಲೆ ದಿನಾಂಕ 18-11-2021.

****

ಉಲ್ಲೇಖಿತ ಸುತ್ತೋಲೆಯ ದಿನಾಂಕ 18-11-2021 ರಲ್ಲಿ ಪ್ರಥಮ ಮತ್ತು ದ್ವಿತೀಯ ಪಿಯುಸಿ ಮಧ್ಯವಾರ್ಷಿಕ ಪರೀಕ್ಷೆ ನಡೆಸುವ ಕುರಿತು ವೇಳಾಪಟ್ಟಿಯನ್ನು ಪ್ರಕಟಿಸಲಾಗಿತ್ತು. ಸದರಿ ವೇಳಾಪಟ್ಟಿಯಲ್ಲಿ ಪರೀಕ್ಷಾ ಸಮಯವನ್ನು ಬೆಳಗ್ಗೆ 09-00 ರಿಂದ 12.15 ರವರೆಗೆ ಹಾಗೂ ಮಧ್ಯಾಹ್ನದ ಅವಧಿಯನ್ನು 02-00 ರಿಂದ 05.15 ರವರೆಗೆ ನಿಗದಿಪಡಿಸಲಾಗಿತ್ತು. ಆದರೆ ಪ್ರಸ್ತುತ ಮಳೆಗಾಲದ ದಿನಗಳಾಗಿದ್ದು ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಮಳೆಯ ಪ್ರಮಾಣ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಮನವಿಗಳ ಮೇರೆಗೆ ಬೆಳಗಿನ ಅವಧಿಯ ಪರೀಕ್ಷಾ ಸಮಯವನ್ನು ಮಾತ್ರ "09.00 ರಿಂದ 12-15"ರ ಬದಲಿಗೆ **09.30 ರಿಂದ 12.45** ರವರೆಗೆ ನಡೆಸಲು ತೀರ್ಮಾನಿಸಿ ಆದೇಶಿಸಿದೆ. ಉಳಿದಂತೆ ಪರೀಕ್ಷಾ ದಿನಾಂಕಗಳಲ್ಲಿ ಹಾಗೂ ಮಧ್ಯಾಹ್ನದ ಪರೀಕ್ಷಾ ಅವಧಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

04/12/2021

ನಿರ್ದೇಶಕರು(ಪರೀಕ್ಷೆ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಇವರಿಗೆ,

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪ್ರಾಂಶುಪಾಲರುಗಳಿಗೆ – ಜಿಲ್ಲಾ ಉಪನಿರ್ದೇಶಕರುಗಳು ಮೂಲಕ.
3. ಇ-ಆಡಳಿತ ಶಾಖೆ, ಇಲಾಖೆ ವೆಬ್‌ಸೈಟ್‌ನಲ್ಲಿ ಅಳವಡಿಸಲು.
4. ಮಾನ್ಯ ನಿರ್ದೇಶಕರ ಆಪ್ತ ಶಾಖೆ-ಮಾಹಿತಿಗಾಗಿ.
5. ಕಛೇರಿ ಪ್ರತಿ.

ಪ್ರತಿಯನ್ನು,

ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.